# ಶಿಕ್ಷಣ ಸಾಮಾಜಿಕ ಜವಾಬ್ದಾರಿಯ ಪ್ರಜ್ಞೆ ಹೆಚ್ಚಿಸುತ್ತದೆ: ಗೆಹ್ಲೋಟ್



ಬೆಂಗಳೂರು, ಸೆ.27: ಶಿಕ್ಷಣವು ಜೀವನದ ಶ್ರೇಷ್ಠ ಕೊಡುಗೆಯಾಗಿದೆ. ನಮಗೆ ಉದ್ಯೋಗಾವಕಾಶಗಳ ಜೊತೆಗೆ ನೈತಿಕತೆ, ಸಹಾನುಭೂತಿ ಮತ್ತು ಸಾಮಾಜಿಕ ಜವಾಬ್ದಾರಿಯ ಪ್ರಜ್ಞೆಯನ್ನು ಹೆಚ್ಚಿಸುತ್ತದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ.

ಶನಿವಾರ ನಗರದಲ್ಲಿ ಆಯೋಜಿಸಿದ್ದ ಸೇಂಟ್ ಜೋಸೆಫ್ ವಿಶ್ವವಿದ್ಯಾನಿಲಯದ ಎರಡನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ಜ್ಞಾನದ ಶಕ್ತಿ ಇದೆ. ಅದನ್ನು ಸಮಾಜದ ಸುಧಾರಣೆ ಮತ್ತು ಮಾನವೀಯತೆಯ ಪ್ರಗತಿಗಾಗಿ ಬಳಸಿದರೆ ಮಾತ್ರ ಈ ಶಕ್ತಿ ಅರ್ಥಪೂರ್ಣವಾಗುತ್ತದೆ ಎಂದು ತಿಳಿಸಿದರು.

ವಿಶ್ವ ದರ್ಜೆಯ ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಗಳಿಗೆ ಬೆಂಗಳೂರು ನೆಲೆಯಾಗಿದೆ. ನಗರವನ್ನು ಶಿಕ್ಷಣ ಕೇಂದ್ರವನ್ನಾಗಿ ಮಾಡುವಲ್ಲಿ ಜೆಸ್ಯೂಟ್ ಸಂಸ್ಥೆಗಳು ಮಹತ್ವದ ಪಾತ್ರ ವಹಿಸಿವೆ. ಜೆಸ್ಯೂಟ್ ಸಂಸ್ಥೆಗಳು ಶಿಕ್ಷಣವನ್ನು ಕೌಶಲ್ಯ ಮತ್ತು ನೈತಿಕ ಮೌಲ್ಯಗಳೊಂದಿಗೆ ಸಂಯೋಜಿಸುವ ಮೂಲಕ ನವ ಭಾರತ, ಉತ್ತಮ ಭಾರತವನ್ನು ನಿರ್ಮಿಸುವ ದೃಷ್ಟಿಕೋನದ ಕಡೆಗೆ ಕೆಲಸ ಮಾಡುತ್ತಿವೆ ಎಂದು ಅವರು ಹೇಳಿದರು.

ಸಮಾರಂಭದಲ್ಲಿ ವಿಶ್ವವಿದ್ಯಾನಿಲಯದ ಪ್ರೊ-ಚಾನ್ಸೆಲರ್ ಫಾದರ್ ಸ್ವೀಬರ್ಟ್ ಡಿ'ಸಿಲ್ವಾ, ಉಪಕುಲಪತಿ ಡಾ.ವಿಕ್ಟರ್ ಲೋಬೋ ಮುಂತಾದ ಗಣ್ಯರು ಉಪಸ್ಥಿತರಿದ್ದರು.

> ಪ್ರಸಕ್ತ ಕಾಲಘಟ್ಟವು ಅವಕಾಶ ಮತ್ತು ಸವಾಲುಗಳಿಂದ ತುಂಬಿದೆ. ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿನ ತ್ವರಿತ ಬದಲಾವಣೆಗಳು, ಕೃತಕ ಬುದ್ಧಿಮತ್ತೆಯ ಪ್ರಭಾವ, ಪರಿಸರ ಬಿಕ್ಕಟ್ಟುಗಳು ಮತ್ತು ಜಾಗತಿಕ ಸ್ಪರ್ಧೆಯು ಯಶಸ್ವಿ ವೃತ್ತಿಪರರನ್ನಾಗಿಸುತ್ತದೆ. ಹೀಗಾಗಿ ದೇಶದ ಯುವ ಜನತೆ ಕೊಡುಗೆ ನೀಡಿ ಮತ್ತು ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟವನ್ನಾಗಿ ಮಾಡಲು ಪ್ರಯತ್ನಿಸಬೇಕು.
>
> -ಥಾವರ್ ಚಂದ್ ಗೆಹ್ಲೋಟ್,
> ರಾಜ್ಯಪಾಲ